ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 5/3/21

# ಕೇಂದ್ರ ಸಚಿವ ನಾಯ್ಕ್ ಆರೋಗ್ಯ ವಿಚಾರಿಸಿದ ಕಾಗೇರಿ

ಪಣಜಿ: ಕರ್ನಾಟಕ ವಿಧಾನಸಭೆ ಸಭಾಪತಿ ವಿಶ್ವೇಶ್ವರ ಹೆಗಡೆ ಕಾಗೇರಿಯವರು ಭಾನುವಾರ ಗೋವಾಕ್ಕೆ ಆಗಮಿಸಿ ಕೇಂದ್ರ ಆಯುಷ್ ಮಂತ್ರಿ ಶ್ರೀಪಾದ ನಾಯ್ಕರವರ ಆರೋಗ್ಯ ವಿಚಾರಿಸಿದರು. ಕಳೆದ ಸುಮಾರು ಒಂದು ತಿಂಗಳ ಹಿಂದೆ ಉತ್ತರ ಕನ್ನಡದ ಯಲ್ಲಾಪುರದಿಂದ ಗೋಕರ್ಣಕ್ಕೆ ತೆರಳುತ್ತಿದ್ದ ಸಂದರ್ಭದಲ್ಲಿ ಕೇಂದ್ರ ಆಯುಷ್ ಮಂತ್ರಿ ಶ್ರೀಪಾದ ನಾಯ್ಕ ಅವರ ಕಾರು ಅಪಘಾತಗೊಂಡು ಗಂಭೀರ ಗಾಯಗೊಂಡಿದ್ದರು.

ನಾಯ್ಕ ಅವರ ಪತ್ನಿ ಸಾವನ್ನಪ್ಪಿದ್ದರು. ಸದ್ಯ ಆಸ್ಪತ್ರೆಯಿಂದ ಬಿಡುಗಡೆಗೊಂಡಿರುವ ಶ್ರೀಪಾದ ನಾಯ್ಕ್ ಚೇತರಿಸಿಕೊಳ್ಳುತ್ತಿದ್ದಾರೆ. ಭಾನುವಾರ ಬೆಳಗ್ಗೆ ಉತ್ತರ ಗೋವಾದ ರಾಯಬಂದರಗೆ ಆಗಮಿಸಿದ ಸಭಾಪತಿ ಕಾಗೇರಿಯವರು ಕೇಂದ್ರ ಆಯುಷ್ ಮಂತ್ರಿ ಶ್ರೀಪಾದ ನಾಯ್ಕರವರ ಆರೋಗ್ಯ ವಿಚಾರಿಸಿದರು. ಕಾಗೇರಿಯವರು ಶಿರಸಿಯ ಶ್ರೀ ಮಾರಿಕಾಂಬಾ ದೇವಿಯ ಫೋಟೋವನ್ನು ಶ್ರೀಪಾದ ನಾಯ್ಕ ರವರಿಗೆ ನೀಡಿ ಶೀಘ್ರ ಗುಣಮುಖರಾಗಲೆಂದು ಅಭಿನಂದಿಸಿದರು. ಈ ಸಂದರ್ಭದಲ್ಲಿ ದಕ್ಷಿಣ ಗೋವಾದ ಮಾಜಿ ಸಂಸದ ನರೇಂದ್ರ ಸಾವಯಿಕರ್ ಇದ್ದರು.